ವೈದ್ಯಕೀಯ ಕಾಲೇಜು

3868(4258); ಶ್ರೀ ಮಂಜುನಾಥ ಗೌಡ ಕೆ.ಎಸ್. (ಮಾಲೂರು)

ಅ) ಕೋಲಾರ ಜಿಲ್ಲೆ ಮಾಲೂರು ತಾಲ್ಲೂಕಿನಲ್ಲಿ ಸರ್ಕಾರಿ ವೈದ್ಯಕೀಯ ಕಾಲೇಜು ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಬಂದಿದ್ದರೆ, ವೈದ್ಯಕೀಯ ಕಾಲೇಜು ಮಂಜೂರು ಮಾಡುವ ಪ್ರಸ್ತಾವನೆ ಸರ್ಕಾರದ ಮುಂದೆ ಇದಯೇ;

ಇ) ಹಾಗಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮವೇನು?

ಡಾ॥ ಶರಣ ಪ್ರಕಾಶ ಪಾಟೀಲ್ (ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು)

ಅ) ಹೌದು

ಆ) ಮತ್ತು ಇ) ರಾಜ್ಯದ ಪ್ರತಿ ಜಿಲ್ಲೆಗೆ ಒಂದರಂತೆ ಸರ್ಕಾರಿ ವೈದ್ಯಕೀಯ ಕಾಲೇಜನ್ನು ಹಂತ ಹಂತವಾಗಿ ಒದಗಿಸುವುದು ಸರ್ಕಾರದ ನೀತಿಯಾಗಿದೆ. ಅದರಂತೆ, ಕೋಲಾರ ಜಿಲ್ಲೆಯಲ್ಲಿ ಲಭ್ಯವಿರುವ ಮೂಲಭೂತ ಸೌಲಭ್ಯಗಳು ಹಾಗೂ ಅನುದಾನದ ಲಭ್ಯತೆಯನ್ನು ಆದರಿಸಿ ಮುಂಬರುವ ವರ್ಷಗಳಲ್ಲಿ ಕೋಲಾರ ಜಿಲ್ಲೆಗೆ ವೈದ್ಯಕೀಯ ಕಾಲೇಜನ್ನು ಮಂಜೂರು ಮಾಡುವ ಬಗ್ಗೆ ಪರಿಶೀಲಿಸಿ, ಸರ್ಕಾರಿ ವೈದ್ಯಕೀಯ ಕಾಲೇಜನ್ನು ಸ್ಥಾಪಿಸಲು ಹಂತ ಹಂತವಾಗಿ ಕ್ರಮ ಕೈಗೊಳ್ಳಲಾಗುವುದು.

ವಿದ್ಯಾರ್ಥಿಗಳ ವಸತಿ ನಿಲಯಗಳು

3869(4259); ಶ್ರೀ ಮಂಜುನಾಥ ಗೌಡ ಕೆ.ಎಸ್. (ಮಾಲೂರು)

ಅ) ಮಾಲೂರು ತಾಲ್ಲೂಕಿನ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಮೆಟ್ರಿಕ್ ಪೂರ್ವ ವಿದ್ಯಾರ್ಥಿ/ ವಿದ್ಯಾರ್ಥಿನಿಯರುಗಳ ವಸತಿ ನಿಲಯಗಳ ಸಂಖ್ಯೆ ಎಷ್ಟು; (ವಿವರ ನೀಡುವುದು);